Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

14.01.2025 18.40 hrs

<><*<><>*><>

ಮುಖ್ಯಾಂಶಗಳು

- ಮಂಡ್ಯದಲ್ಲಿಂದು 'ಸಂಕ್ರಾಂತಿ ಸಂಭ್ರಮ' ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಎನ್. ಚಲುವರಾಯಸ್ವಾಮಿ
- ದೇಶಾದ್ಯಂತ ಸಶಸ್ತ್ರ ಪಡೆಗಳ ಮಾಜಿ ಯೋಧರ ದಿನಾಚರಣೆ ; ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರ ಸ್ಮರಣೆ
- ಕೊಪ್ಪಳದಲ್ಲಿ ರೈಲ್ವೆ ಮೇಲ್ಸೇತುವೆ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ವಿ. ಸೋಮಣ್ಣ
- ಬೀದರ್‌ನಲ್ಲಿ ಆಧುನಿಕ ಅನುಭವ ಮಂಟಪ ಕಾಮಗಾರಿ ಒಂದು ವರ್ಷದೊಳಗೆ ಪೂರ್ಣ - ಸಚಿವ ಈಶ್ವರ್ ಖಂಡ್ರೆ

<><*<><>*><>

ನಾಡಿನಾದ್ಯಂತ ಪುಷ್ಯ ಮಾಸದ ಕೃಷ್ಣ ಪಕ್ಷದ ಪ್ರತಿಪದ ದಿನವಾದ ಇಂದು ಮಕರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಇಂದು ಜನರು ತಮ್ಮ ಬಂಧು-ಮಿತ್ರರೊಂದಿಗೆ ಎಳ್ಳು, ಬೆಲ್ಲ, ಹಂಚಿ, ಎಲ್ಲರ ಬಾಳಿನಲ್ಲಿ ಸುಖ ಶಾಂತಿ ನೆಲೆಸಲಿ ಎಂದು ಪ್ರಾರ್ಥಿಸುತ್ತಾ ಸಂಭ್ರಮಿಸಿದರು. ಸಂಜೆ ದನಗಳನ್ನು ಕಿಚ್ಚು ಹಾಯಿಸುವ ಕಾರ್ಯಕ್ರಮಗಳು ಜರುಗಿದವು. ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ರಾಜ್ಯದ ಜನತೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸೇರಿದಂತೆ ಗಣ್ಯರು ಶುಭಾಶಯ ಕೋರಿದ್ದಾರೆ. ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ರಾಜಭವನದಲ್ಲಿಂದು ಗೋವುಗಳಿಗೆ ಪೂಜೆ ಸಲ್ಲಿಸಿದರು. ನಂತರ ಮಾತನಾಡಿದ ಅವರು, ಕರ್ನಾಟಕದ ಸಮಸ್ತ ಜನತೆಗೆ ದೇವರು ಆರೋಗ್ಯ, ಆಯಸ್ಸು ಮತ್ತು ಶಾಂತಿಯನ್ನು ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದರು. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ ಸಂಕ್ರಾಂತಿ ಸಂಭ್ರಮ ವಿಶೇ? ಕಾರ್ಯಕ್ರಮ ಆಯೋಜಿಸಲಾಗಿದ್ದು, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ನೀಡಿದರು. ಇದೇ ವೇಳೆ ಗೋಪೂಜೆ ಹಾಗೂ ಕಿಚ್ಚು ಹಾಯಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಸಂಭ್ರಮದ ಭಾಗವಾಗಿ ವಿವಿಧ ಧಾನ್ಯಗಳು ಕೃಷಿ ಸಲಕರಣೆಗಳ ಪ್ರದರ್ಶನ, ಕಬ್ಬಡಿ, ಕುಸ್ತಿ ಪಂದ್ಯಾವಳಿಗಳು ಮಿಶ್ರತಳಿ ಹೆಣ್ಣು ಕರುಗಳ ಪ್ರದರ್ಶನ, ಕಡಲೇಕಾಯಿ, ಅವರೆಕಾಯಿ,

ಬೆಲ್ಲದ ಪರಿಷೆ ಹಾಗೂ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಸಚಿವ ಚಲುವರಾಯಸ್ವಾಮಿ, ಸಂಕ್ರಾತಿ ಹಬ್ಬ ಕೃಷಿಗೆ ಸಂಬಂಧಿಸಿದ ಹಬ್ಬವಾಗಿದೆ. ಇದರ ಆಚರಣೆಯ ಭಾಗವಾಗಿ ಹಲವಾರು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದಿದ್ದಾರೆ.

ಧ್ವನಿ : ಚಲುವರಾಯಸ್ವಾಮಿ

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲೂ ಇಂದು ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ : ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಸಂಕ್ರಾಂತಿ ಹಬ್ಬವನ್ನು ವಿಶೇಷತೆಯಿಂದ ಆಚರಿಸಲಾಯಿತು. ಉತ್ತರ ಕರ್ನಾಟಕದ ಬುತ್ತಿ ಊಟ ಮನೆಯಲ್ಲೇ ತಯಾರಿಸಿ, ಉದ್ಯಾನವನಗಳಿಗೆ  ತೆರಳಿ ಸಂಬಂಧಿಕರೊಂದಿಗೆ ಸವಿದು ವಿಶೇಷವಾಗಿ ಆಚರಿಸಲಾಯಿತು. ವಿಜಯಪುರ ಜಿಲ್ಲಾಧಿಕಾರಿ ಟಿ. ಭೂಬಾಲನ್ ನಗರದ ಅಫ್ಜಲಪೂರದಲ್ಲಿರುವ ಬಾಲಕರ ಬಾಲ ಮಂದಿರದ ಮಕ್ಕಳೊಂದಿಗೆ ಸಂಕ್ರಾಂತಿ ಹಬ್ಬವನ್ನು ಆಚರಿಸಿದರು. ಎಲ್ಲ ಮಕ್ಕಳಿಗೂ ಹೊಸ ಬಟ್ಟೆಯ ಉಡುಗೊರೆ ನೀಡಿ, ಸಂಕ್ರಾತಿ ಹಬ್ಬದ ಸಾಂಪ್ರದಾಯಿಕ ಸಿಹಿ ತಿನಿಸುಗಳಾದ ಕಬ್ಬು, ಕುಸರೆಳ್ಳು ಮೊದಲಾದವುಗಳನ್ನು ವಿತರಿಸಿ ಶುಭಕೋರಿದರು.  ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ನವದೆಹಲಿಯ ಲಾಡಲಿ ಫೌಂಡೇಷನ್ ಪ್ರತಿಷ್ಠಾನದ ಸಹಯೋಗದಲ್ಲಿ ಈ ವಿಶೇಷ ಕಾರ್ಯಕ್ರಮವನ್ನು ರೂಪಿಸಲಾಗಿತ್ತು.

<><*<><>*><>

ಸಶಸ್ತ್ರ ಪಡೆಗಳ ಮಾಜಿ ಕಮಾಂಡರ್-ಇನ್-ಚೀಫ್ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರ ನಿವೃತ್ತಿ ದಿನದ ಸ್ಮರಣಾರ್ಥ ದೇಶಾದ್ಯಂತ ಇಂದು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ದಿನವಾಗಿ ಆಚರಿಸಲಾಗುತ್ತಿದ್ದು, ಅವರ ಸಾಧನೆಗಳನ್ನು ಸ್ಮರಿಸಿಲಾಗುತ್ತಿದೆ.

ಈ ಕುರತು ಒಂದು ವರದಿ : ಗಿರೀಶ್ (೪೭ ಸೆಕೆಂಡ್ಸ್)

ಸಶಸ್ತ್ರ ಪಡೆಗಳ ನಿವೃತ್ತ ಯೋಧರ ದಿನ ಧೈರ್ಯ, ಛಲ ಮತ್ತು ಸಾಹಸದೊಂದಿಗೆ ದೇಶವನ್ನು ರಕ್ಷಿಸಿದ ಮೂರೂ ಸೇನಾಪಡೆಗಳ ನಿವೃತ್ತ ಯೋಧರ ಅಮೂಲ್ಯ ಕೊಡುಗೆಗಳನ್ನು ಸ್ಮರಿಸುವ ಒಂದು ಕ್ಷಣವಾಗಿದೆ. ದೇಶದ ರಕ್ಷಣೆಗೆ ಅಚಲ ಬದ್ಧತೆ ಹೊಂದಿರುವ ಯೋಧರಿಗೆ ಮಾತ್ರವಲ್ಲದೆ ಅವರ ಕುಟುಂಬಗಳಿಗೂ ಕೃತಜ್ಞತೆಯನ್ನು ವ್ಯಕ್ತಪಡಿಸಲು ಇದು ಒಂದು ಅವಕಾಶವಾಗಿದೆ. ದೇಶಾದ್ಯಂತ, ಧೈರ್ಯಶಾಲಿ ಯೋಧರನ್ನು ಗೌರವಿಸಲು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.  ಮಾಜಿ ಸೈನಿಕರು ಮತ್ತು ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಯ ನಡುವಿನ ಬಾಂಧವ್ಯವನ್ನು ಬಲಪಡಿಸುವ ಗುರಿ ಈ ದಿನವಾಗಿದ್ದು, ನಿವೃತ್ತ ಸೈನಿಕರು ಮತ್ತು ಅವರ

ಕುಟುಂಬಗಳು ಎದುರಿಸುವ ಪಿಂಚಣಿ ಸೇರಿದಂತೆ ಇತರ ಸಮಸ್ಯೆಗಳನ್ನು ಪರಿಹರಿಸಲು ಒಂದು ವೇದಿಕೆಯನ್ನು ಸೃಷ್ಟಿಸುತ್ತದೆ. ರಾಷ್ಟ್ರದ ವೀರ ಯೋಧರ ಧೈರ್ಯ ಮತ್ತು ತ್ಯಾಗಗಳು ಭವಿಷ್ಯದ ಪೀಳಿಗೆಗಳಿಗೆ ಎಂದಿಗೂ ಸ್ಫೂರ್ತಿದಾಯಕವಾಗಿದೆ. ಬೆಂಗಳೂರಿನ ಜಾಲಹಳ್ಳಿಯ ವಾಯುನೆಲೆಯಲ್ಲಿಂದು ೯ನೇ ಸಶಸ್ತ್ರ ಪಡೆಗಳ ಮಾಜಿ ಯೋಧರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಭಾರತೀಯ ವಾಯುಪಡೆಯ ಟ್ರೈನಿಂಗ್ ಕಮಾಂಡ್‌ನ ಏರ್ ಆಫೀಸರ್ ಕಮಾಂಡರ್-ಇನ್-ಚೀಫ್ ಏರ್ ಮಾರ್ಷಲ್ ನಾಗೇಶ್ ಕಪೂರ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಏರ್ ಮಾರ್ಷಲ್ ನಾಗೇಶ್ ಕಪೂರ್, ಟ್ರೈನಿಂಗ್ ಕಮಾಂಡ್‌ನ ಹಿರಿಯ ಅಧಿಕಾರಿಗಳು ಟ್ರೈನಿಂಗ್ ಕಮಾಂಡ್ ಆವರಣದಲ್ಲಿರುವ ಯುದ್ಧ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಳಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ನಾಗೇಶ್ ಕಪೂರ್, ಯೋಧರ ನಿಸ್ವಾರ್ಥ ಸೇವೆಯ ಕುರಿತು ಹೆಮ್ಮೆ ವ್ಯಕ್ತಪಡಿಸಿದರು. ಹಾಗೆಯೇ ರಾಷ್ಟ್ರ ನಿರ್ಮಾಣದಲ್ಲಿ ಕೊಡುಗೆ ನೀಡುತ್ತಿರುವ ಯೋಧರಿಗೆ ಅವರ ಕುಟುಂಬದವರೇ ಪ್ರಮುಖ ಆಧಾರಸ್ತಂಭ ಎಂದರು. ಕಾರ್ಯಕ್ರಮದ ಸ್ಥಳದಲ್ಲಿ ಮಾಜಿ ಯೋಧದ ಹಲವು ಸಮಸ್ಯೆಗಳ ಪರಿಹಾರಕ್ಕಾಗಿ ರಕ್ಷಣಾ ಖಾತೆ ನಿಯಂತ್ರಕ ಸಿಡಿಎ, ಮಾಜಿ ಸೈನಿಕರ ವಿಮೆ ಯೋಜನೆ, ವಿವಿಧ ಖಾಸಗಿ ಹಾಗೂ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳ ಸೇವೆ ಒದಗಿಸಲಾಗಿತ್ತು. ಬೆಳಗಾವಿಯ ಮರಾಠ ಲೈಟ್ ಪದಾತಿದಳ ರಜಮೆಂಟಲ್ ಕೇಂದ್ರದಲ್ಲೂ ಮಾಜಿ ಯೋಧರನ್ನು ಗೌರವಿಸುವ ಮೂಲಕ ವೆಟರನ್ಸ್ ಡೇ ಆಚರಿಸಲಾಯಿತು.

<><*<><>*><>

ಕೇಂದ್ರ ಜಲ ಶಕ್ತಿ ಮತ್ತು ರೈಲ್ವೆ ಖಾತೆಯ ರಾಜ್ಯ ಸಚಿವ ವಿ.ಸೋಮಣ್ಣ ಇಂದು ಕೊಪ್ಪಳ ನಗರದಲ್ಲಿನ ಕುಷ್ಟಗಿ ರಸ್ತೆಯ ರೈಲ್ವೆ ಮೇಲ್ಸೇತುವೆ ಲೋಕಾರ್ಪಣೆಗೊಳಿಸಿದರು. ಇಂದು ಅವರು, ಲೆವೆಲ್ ಕ್ರಾಸಿಂಗ್ ೬೬ರ ಬದಲಿಗೆ ನಿರ್ಮಿಸಿರುವ ರಸ್ತೆ ಮೇಲ್ಸೇತುವೆಯನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಸಂಪರ್ಕ ಹಾಗೂ ಮೂಲಸೌಕರ್ಯಗಳನ್ನು ಸುಧಾರಿಸಲು ಭಾರತೀಯ ರೈಲ್ವೆ ಬದ್ಧವಾಗಿದೆ ಎಂದರು. ಗದಗ ಮತ್ತು ವಾಡಿ ನಡುವಿನ ಹೊಸ ರೈಲು ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದ್ದು, ಪರಿಶೀಲನೆ ನಂತರ ಶೀಘ್ರದಲ್ಲೇ ಕಾರ್ಯನಿರ್ವಹಿಸಲಿದೆ ಎಂದರು. ೫೦ ವರ್ಷಗಳ ಬೇಡಿಕೆಯಾದ ರೈಲ್ವೆ ಇಲಾಖೆಯ ನೇಮಕಾತಿ ಪರೀಕ್ಷೆಗೆ ಕನ್ನಡ ಭಾಷೆಯಲ್ಲಿ ಬರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ಹೇಳಿದರು

ಧ್ವನಿ : ವಿ.ಸೋಮಣ್ಣ. ಕೇಂದ್ರ ಸಚಿವರು

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ರಾಘವೇಂದ್ರ ಹಿಟ್ನಾಳ್, ಅಂಜನಾದ್ರಿಯಿಂದ ಅಯೋಧ್ಯೆವರೆಗೆ ನೂತನ ವಂದೇ ಭಾರತ್ ರೈಲು ಸಂಚರಿಸಲು ಕ್ರಮ ಕೈಗೊಳ್ಳಲು ಕೇಂದ್ರ

ಸಚಿವರಲ್ಲಿ ಮನವಿ ಮಾಡಿದರು. ವಿಧಾನ ಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಶಾಸಕ ದೊಡ್ಡನಗೌಡ ಪಾಟೀಲ್, ಉದ್ಘಾಟನೆಯಾಗಿರುವ ಮೇಲ್ಸೇತುವೆಗೆ ಕಿತ್ತೂರು ರಾಣಿ ಚೆನ್ನಮ್ಮ ಹೆಸರಿಡುವಂತೆ ಸಚಿವರಿಗೆ ಮನವಿ ಮಾಡಿದರು.

<><*<><>*><>

ವಿಶ್ವಗುರು ಬಸವಣ್ಣನವರ ಕರ್ಮಭೂಮಿ ಬೀದರ್ ಜಿಲ್ಲೆಯ ಬಸವ ಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ಆಧುನಿಕ ಅನುಭವ ಮಂಟಪ ಕಾಮಗಾರಿಯನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ. ಬೆಂಗಳೂರಿನ ಅರಮನೆ ಆವರಣದಲ್ಲಿಂದು ನಡೆದ ಸಿದ್ದರಾಮೇಶ್ವರರ ೮೫೨ನೇ ಜಯಂತ್ಯುತ್ಸವದಲ್ಲಿ ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಮಾತನಾಡಿದ ಅವರು, ಬಸವಕಲ್ಯಾಣದ ಅನುಭವ ಮಂಟಪ ಪ್ರಜಾಪ್ರಭುತ್ವ ಮತ್ತು ಸಂಸತ್ತಿನ ಪರಿಕಲ್ಪನೆಯನ್ನು ವಿಶ್ವಕ್ಕೆ ನೀಡಿದೆ ಎಂದು ತಿಳಿಸಿದರು.  ಈಗಿರುವ ಅನುಭವ ಮಂಟಪ ನಿರ್ಮಾಣಕ್ಕೆ ಭೀಮಣ್ಣ ಖಂಡ್ರೆ ಅವರ ಕೊಡುಗೆ ಸ್ಮರಿಸಿದ ಈಶ್ವರ ಖಂಡ್ರೆ, ಆಧುನಿಕ ಅನುಭವ ಮಂಟಪದ ೭೭೦ ಕಂಬಗಳಲ್ಲಿ ಬಸವಾದಿ ಶರಣರುಗಳೆಲ್ಲರ ವಚನಗಳನ್ನು ಕೆತ್ತಿಸಲಾಗುವುದು. ಈ ಮೂಲಕ ಶರಣ ಸಾಹಿತ್ಯ, ವಚನ ಸಾಹಿತ್ಯ ಚಿರಸ್ಥಾಯಿಯಾಗಿ ಉಳಿಯುಂತೆ ಮಾಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಕೇಂದ್ರ ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಶಾಸಕರಾದ ಗೋವಿಂದ ಕಾರಜೋಳ, ಬಿ.ವೈ. ವಿಜಯೇಂದ್ರ, ಎಸ್.ಆರ್. ವಿಶ್ವನಾಥ್, ಜ್ಯೋತಿ ಗಣೇಶ್ ಮತ್ತಿತರರು  ಪಾಲ್ಗೊಂಡಿದ್ದರು.

<><*<><>*><>

ಕರ್ನಾಟಕ ಪತ್ರಕರ್ತರ ಸಹಕಾರ ಸಂಘ ಹೊರತಂದಿರುವ ೨೦೨೫ರ ಕ್ಯಾಲೆಂಡರ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಕ್ರಾಂತಿ ಹಬ್ಬದ ದಿನವಾದ ಇಂದು ಬೆಂಗಳೂರಿನಲ್ಲಿ ಬಿಡುಗಡೆ ಮಾಡಿದರು. ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪತ್ರಕರ್ತರ ಸಂಘ ೭೫ ವರ್ಷ ಪೂರೈಸಿರುವ ಕುರಿತು ಸಂತಸ ವ್ಯಕ್ತಪಡಿಸಿದರು. ಇದೇ ವೇಳೆ ಸಚಿವರಾದ ಸತೀಶ್ ಜಾರಕಿಹೊಳಿ, ಎಂ.ಬಿ.ಪಾಟೀಲ್, ಶಾಸಕ ರಘುಮೂರ್ತಿ ಉಪಸ್ಥಿತರಿದ್ದರು.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ಸುಮುದಾಯದ ಪ್ರಾಣಿಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಸಾರ್ವಜನಿಕರೊಂದಿಗೆ ಸಮನ್ವಯವನ್ನು ಸುಧಾರಿಸುವ ನಿಟ್ಟಿನಲ್ಲಿ, ಬಿಬಿಎಂಪಿಯ ಪಶುಪಾಲನಾ ವಿಭಾಗ ೧೫೩೩ ಸಹಾಯವಾಣಿ ಮೂಲಕ ತ್ವರಿತಗತಿಯಲ್ಲಿ ಬಗೆಹರಿಸಲು ಕ್ರಮ ವಹಿಸಲಾಗಿದೆ

ಎಂದು ಪಶುಸಂಗೋಪನಾ ವಿಭಾಗದ ವಿಶೇಷ ಆಯುಕ್ತ ವಿಕಾಸ್ ಕಿಶೋರ್ ಸುರಳ್ಕರ್ ತಿಳಿಸಿದ್ದಾರೆ. ಪ್ರಸ್ತುತ, ನಾಗರಿಕರು ತಮ್ಮ ಪ್ರಶ್ನೆಗಳನ್ನು ಪರಿಹರಿಸಲು ವಾಟ್ಸಾಪ್ ಗುಂಪುಗಳು, ಫೇಸ್ಬುಕ್ ಗುಂಪುಗಳು, ವೈಯಕ್ತಿಕ ಸಹಾಯಕ ನಿರ್ದೇಶಕರ ಸಂಖ್ಯೆಗಳಿಗೆ ಕರೆ ನೀಡಿ, ಇಮೇಲ್‌ಗಳು ಮತ್ತು ಇನ್ನಿತರ ವೇದಿಕೆಗಳನ್ನು ತಲುಪುತ್ತಿದ್ದಾರೆ.

<><*<><>*><>

ಇಂದು ರಾಜ್ಯದ ವಿವಿಧೆಡೆ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಅಚರಣಾ ಸಮಿತಿ ವತಿಯಿಂದ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಿಸಲಾಯಿತು. ಶಾಸಕ ಧೀರಜ್ ಮುನಿರಾಜು ಮಾತನಾಡಿ, ಸಿದ್ಧರಾಮೇಶ್ವರರು ಶ್ರಮಿಕ ವರ್ಗದಲ್ಲಿ ಜನಿಸಿ, ೧೨ನೇ ಶತಮಾನದಲ್ಲೇ ಕೆರೆಕುಂಟೆಗಳನ್ನು ಕಟ್ಟಿಸುವ ಮೂಲಕ ಜನೋಪಯೋಗಿ ಕೆಲಸಗಳ ಮೂಲಕ ವಚನಕಾರರಲ್ಲೇ ವಿಶೇಷವಾಗಿ ಗುರುತಿಸಿಕೊಂಡಿದ್ದರು ಎಂದು ತಿಳಿಸಿದ್ದಾರೆ. ವಚನಗಳನ್ನು ಪಠ್ಯಕ್ಕೆ ಮಾತ್ರ ಸೀಮಿತಗೊಳಿಸದೇ, ವಿದ್ಯಾರ್ಥಿಗಳು ಅವುಗಳ ಆಳ-ವಿಸ್ತಾರ ಅರಿತಾಗ ಮಾತ್ರ ಮಹನೀಯರ ಚಿಂತನೆಗಳನ್ನು ಅರ್ಥಮಾಡಿಕೊಳ್ಳಬಹುದು ಎಂದು ಚಿತ್ರದುರ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಸಿದ್ಧರಾಮೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಗದಗ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ ಜಯಂತ್ಯೋತ್ಸವ ಕಾರ್ಯಕ್ರಮ ಜರುಗಿತು. ಗದಗ ತಾಲೂಕ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ಕೃಷ್ಣಗೌಡ ಪಾಟೀಲ, ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಇಂದಿನ ಕಾಲಮಾನದಲ್ಲಿ ಶಿವಯೋಗಿ ಸಿದ್ಧರಾಮೇಶ್ವರಂತಹ ಮಹಾನ ವ್ಯಕ್ತಿಗಳ ಆದರ್ಶ, ತತ್ವಗಳು ಅವರ ಸಾಧನೆಗಳನ್ನು ಯುವ ಪೀಳಿಗೆ ತಿಳಿದುಕೊಳ್ಳುವುದು ಅಗತ್ಯವಾಗಿದ್ದು, ಅವುಗಳನ್ನು ಪಾಲನೆ ಮಾಡುವುದರ ಮೂಲಕ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಉತ್ತರಕನ್ನಡ ಜಿಲ್ಲಾ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಹೇಳಿದರು.

<><*<><>*><>

ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಮತ್ತು ಹಿರಿಯ ಸಾಹಿತಿ ಕೃಷ್ಣ ಕೊಲ್ಹಾರ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದು ಭೇಟಿಯಾಗಿ ಎಂ.ಎಂ.ಕಲ್ಬುರ್ಗಿ ಅವರ ೪೨ ಸಮಗ್ರ ಸಂಪುಟಗಳ ಬಿಡುಗಡೆಗೆ ದಿನಾಂಕ ನಿಗದಿಪಡಿಸುವಂತೆ ಮನವಿ ಸಲ್ಲಿಸಿದರು. ಈ ವೇಳೆ ಕಲ್ಬುರ್ಗಿ ಅವರ ಸಾಹಿತ್ಯದ ಸಮಗ್ರ ಸಂಪುಟ ಕುರಿತು ಮುಖ್ಯಮಂತ್ರಿಯವರಿಗೆ ಅವರು

ವಿವರಿಸಿದರು. ಬಳಿಕ ಮುಖ್ಯಮಂತ್ರಿ ಸೂಕ್ತ ದಿನಾಂಕ ನೀಡುವ ಭರವಸೆ ನೀಡಿದರು. ಇದೇ ವೇಳೆ ಸಚಿವರು, ದಾಸ ಸಾಹಿತ್ಯದ ಸಮಗ್ರ ಸಂಪುಟ ಕೂಡ ಸಿದ್ಧವಾಗುತ್ತಿದ್ದು, ಅದಕ್ಕೆ ಸರ್ಕಾರದಿಂದ ಬರಬೇಕಿದ್ದ ಹಣ ಬಿಡುಗಡೆ ಮಾಡುವಂತೆ ಕೋರಿಕೆ ಸಲ್ಲಿಸಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>